9-330-(92)

**ಕರ್ನಾಟಕ ವಿಧಾನ ಪರಿಷತ್ತು ಮಾನ್ಯ ಸದಸ್ಯರುಗಳಾದ ಶ್ರೀ ಕೆ.ಎ ತಿಪ್ಪೇಸ್ವಾಮಿ, ಶ್ರೀ ಕೆ.ಟಿ ಶ್ರೀಕಂಠೇಗೌಡ, ಶ್ರೀ ಎನ್.ಅಪ್ಪಾಜಿಗೌಡ ಮತ್ತು ಶ್ರೀ ಗೋವಿಂದರಾಜು ಇವರುಗಳ ನಿಯಮ 330ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ವಿಷಯ**

ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದ ಅತೀ ವೇಗವಾಗಿ ಹರಡುತ್ತಿರುವ ಕೋವಿಡ್-19 ಸೋಂಕಿನಿಂದ ಇಡೀ ರಾಜ್ಯದ ಜನತೆ ಬವಣೆಗೆ ಒಳಗಾಗಿರುವುದರ ಜೊತೆಗೆ ಈ ಸೋಂಕು ಹರಡುವಿಕೆ ಹಿನ್ನೆಲೆಯಲ್ಲಿ ವಿಧಿಸಲಾದ ಸಂಬಂಧ ಸಂಪೂರ್ಣ ಲಾಕ್‌ಡೌನ್‌ನಿಂದ ಕೋಟ್ಯಾಂತರ ಮಕ್ಕಳ ವಿದ್ಯಾಭ್ಯಾಸದ ಪ್ರಗತಿಯಲ್ಲಿ ಅಡಚಣೆ ಮತ್ತು ಹಿನ್ನಡೆ ಉಂಟಾಗಿದೆ. ಅದರಲ್ಲೂ, ಬಾಲವಿಕಾಸ ಮತ್ತು ಅಂಗನವಾಡಿಗಳಲ್ಲಿ ಕಲಿಕೆ-ನಲಿಕೆಯಲ್ಲಿ ತೊಡಗಿದ ಮಕ್ಕಳು ಪ್ರಾಥಮಿಕ, ಮಾಧ್ಯಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಓದುವ ಮಕ್ಕಳ ವಿದ್ಯಾಭ್ಯಾಸಕ್ಕೆ ತೀವ್ರ ಹಿನ್ನಡೆ ಉಂಟಾಗಿದೆ.

ಇತ್ತೀಚಿನ ವರದಿಗಳ ಪ್ರಕಾರ, 2019-20ನೇ ಶೈಕ್ಷಣಿಕ ವರ್ಷದಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪ್ರಥಮ ವರ್ಷದ ಪಿ.ಯು ಪರೀಕ್ಷೆ ಮುಗಿಸಿದ ಸುಮಾರು ಒಂದು ಲಕ್ಷ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸವನ್ನು ಮುಂದುವರೆಸದೆ ಶಿಕ್ಷಣದಿಂದಲೇ ಹೊರಗುಳಿಸಿದ್ದಾರೆ. ಮುಂದುವರೆದು, ಎಸ್.ಎಸ್.ಎಲ್.ಸಿಯಲ್ಲಿ ಪಾಸಾದ ವಿದ್ಯಾರ್ಥಿಗಳ ಪೈಕಿ ಸುಮಾರು 25,000 ಮಂದಿ ಪ್ರಥಮ ಪಿ.ಯು, ಡಿಪ್ಲಮ ಅಥವಾ ಐಟಿಐಯಂತಹ ಕೋರ್ಸ್‌ಗಳಿಗೆ ಪ್ರವೇಶ ಪಡೆದಿರುವುದಿಲ್ಲ. ಪ್ರಥಮ ಪಿ.ಯು ಯಿಂದ ದ್ವಿತೀಯ ಪಿ.ಯುಗೆ ತೇರ್ಗಡೆ ಹೊಂದಿದವರ ಪೈಕಿ ಸುಮಾರು 70,000ಕ್ಕೂ ಅಧಿಕ ವಿದ್ಯಾರ್ಥಿಗಳು ದ್ವಿತೀಯ ಪಿಯು ಕೋರ್ಸಗೆ ಸೇರಿಲ್ಲ. ಈ ಶೈಕ್ಷಣಿಕ ವರ್ಷದಲ್ಲಿ ಒಂದು ಲಕ್ಷ ವಿದ್ಯಾರ್ಥಿಗಳು ಕಾಲೇಜುಗಳತ್ತ ಮುಖ ಮಾಡಿಲ್ಲ.

ಈ ವಿದ್ಯಾರ್ಥಿಗಳ ಕುಟುಂಬದ ಸ್ಥಿತಿ-ಗತಿ ಆರ್ಥಿಕ ಸಂಕಷ್ಟ ಜೀವನ ಶೈಲಿ ಮುಂತಾದ ಬೆಳವಣಿಗೆಗಳನ್ನು ಒಳಗೊಂಡಂತೆ ರಾಜ್ಯ ಸರ್ಕಾರ ಒಂದು ಸಮಗ್ರ ಸಮೀಕ್ಷೆ ನಡೆಸುವುದು ಅತ್ಯವಶ್ಯವಿದೆ.

ಇದಲ್ಲದೆ, ಕೋವಿಡ್-19 ಸೋಂಕು ಹರಡುವಿಕೆಯಿಂದ ಲಕ್ಷಾಂತರ ವಿದ್ಯಾರ್ಥಿಗಳ ವಿದ್ಯಾಭ್ಯಾಸದಲ್ಲಿ ಹಿನ್ನಡೆ ಉಂಟಾಗಿದೆ. ಅದು ಆನ್‌ಲೈನ್ ಕ್ಲಾಸ್ ಇರಬಹುದು ಅಥವಾ ಆಫ್‌ಲೈನ್ ಕ್ಲಾಸ್ ಇರಬಹುದು ಮತ್ತು ಶಾಲೆಯಲ್ಲಿ ಬೋಧನೆ ಇರಬಹುದು ಇಂತಹ ಶಿಕ್ಷಣವನ್ನು ನೀಡದ ಶಿಕ್ಷಕ ವರ್ಗದಲ್ಲಿ ಮತ್ತು ಪಡೆದ ವಿದ್ಯಾರ್ಥಿಗಳಲ್ಲಿ ಎಷ್ಟರಮಟ್ಟಿಗೆ ಕಲಿಯುವಿಕೆಯ ಜ್ಞಾನಾರ್ಜನೆ ಉತ್ತೇಜನ ಆಗಿದೆ ಮತ್ತು ಈ ತರಹದ ಮಂದಗತಿ ಬೆಳವಣಿಗೆ- **Retarded Growth** ಮುಂಬರುವ ವರ್ಷಗಳಲ್ಲಿ ಶಾಲಾ-ಕಾಲೇಜುಗಳಲ್ಲಿ ಅಭ್ಯಸಿಸುವ ವಿದ್ಯಾರ್ಥಿಗಳು ಸಾಮರ್ಥ್ಯ ಎಷ್ಟರಮಟ್ಟಿಗೆ ಸ್ಪರ್ಧಾತ್ಮಕವಾಗಿದೆ-**Competability** ಆಗಿದೆ ಎನ್ನುವುದರ ಬಗ್ಗೆ ಸಮೀಕ್ಷೆ ನಡೆಸುವುದು ಅವಶ್ಯಕವಾಗಿದೆ.

ಆದ್ದರಿಂದ, ರಾಜ್ಯದ ವಿದ್ಯಾರ್ಥಿಗಳ ಶ್ರೇಯೋಭೀವೃದ್ಧಿಗೆ ಸಂಬಂಧಿಸಿದಂತೆ ಸಾರ್ವಜನಿಕ ಮಹತ್ವದ ಈ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಬಯಸುತ್ತೇವೆ.

**(ಈ ವಿಷಯದ ಬಗ್ಗೆ ದಿನಾಂಕ:06-03-2021ರಂದು ವಿಜಯ ಕರ್ನಾಟಕದ ದಿನ ಪತ್ರಿಕೆಯಲ್ಲಿ "ಒಂದು ಲಕ್ಷ ಮಕ್ಕಳ ಡ್ರಾಪೌಟ್" ಎಂಬ ಶೀರ್ಷಿಕೆಯಡಿ ಲೇಖನ ಪ್ರಕಟಗೊಂಡಿರುತ್ತದೆ.)**

**ಉತ್ತರ**

ಕೋವಿಡ್-19 ವೈರಾಣು ದೇಶದಾದ್ಯಂತ ವ್ಯಾಪಕವಾಗಿ ಹರಡಿದ ಹಿನ್ನಲೆಯಲ್ಲಿ ಶಾಲಾ ಶೈಕ್ಷಣಿಕ ಚಟುವಟಿಕೆಗಳನ್ನು ನಿಗದಿಗೊಳಿಸಿದ ಕಾರ್ಯಸೂಚಿಯಂತೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸುವ ಸಲುವಾಗಿ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ದಿನಾಂಕ:08-01-2021ರಂತೆ 6 ರಿಂದ 14 ವರ್ಷ ವಯೋಮಿತಿಯ ಶಾಲೆಯಿಂದ ಹೊರಗುಳಿದ ಮಕ್ಕಳನ್ನು - ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಗೊಂಬೆ ಮತ್ತು ಹೂವುಗಳನ್ನು ಮಾರುವ ಮಕ್ಕಳು, ಪರಿತ್ಯಕ್ತ ಮಕ್ಕಳು, ಬೀದಿ ಮಕ್ಕಳು, ಅನಾಥ ಮಕ್ಕಳು ಇತ್ಯಾದಿ ಮಕ್ಕಳನ್ನು ಗುರುತಿಸಿ, ಇಂತಹ ಗುರುತಿಸಿರುವ ಮಕ್ಕಳನ್ನು ಶಾಲೆಗೆ ದಾಖಲು ಮಾಡಿಕೊಳ್ಳುವ ಸಂದರ್ಭದಲ್ಲಿ, ಜನನ ಪ್ರಮಾಣ ಪತ್ರ ಮತ್ತು ವರ್ಗಾವಣೆ ಪತ್ರಗಳನ್ನು ಮಕ್ಕಳ ಪೋಷಕರ/ಸಂಬಂಧಿಕರ ಬಳಿ ಲಭ್ಯವಿಲ್ಲದಿದ್ದಲ್ಲಿ & ಶಾಲೆಗೆ ದಾಖಲಾಗಲು ಬರುವ ಮಗುವಿನಿಂದ ದಾಖಲೆಗಳನ್ನು ಕೊಡುವಂತೆ ಒತ್ತಾಯ ಮಾಡದೆ, ಶಾಲಾ ಮುಖ್ಯವಾಹಿನಿಗೆ ತರುವ ದೃಷ್ಟಿಯಿಂದ ಶೈಕ್ಷಣಿಕ ವರ್ಷದ ಮಧ್ಯದಲ್ಲಿಯೂ ಸಹ ಪ್ರಾಥಮಿಕ 1 ರಿಂದ 8 ನೇ ತರಗತಿಗೆ ಪ್ರವೇಶ ನೀಡಲು ಹಾಗೂ ಈ ಮಕ್ಕಳನ್ನು ಶಾಲೆಗೆ ದಾಖಲು ಮಾಡಿ, ನಂತರ ಕಡ್ಡಾಯ ಪ್ರಾಥಮಿಕ ಶಿಕ್ಷಣದ ವಿದ್ಯಾವಿಕಾಸ ಯೋಜನೆಯ ಅಡಿಯಲ್ಲಿ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಮಧ್ಯಾಹ್ನದ ಬಿಸಿಯೂಟ, ಶೂ ಸಾಕ್ಸ್ ವಿತರಣೆ ಹಾಗೂ ಇತ್ಯಾದಿ ಪ್ರೋತ್ಸಾಹದಾಯಕ ಯೋಜನೆಗಳನ್ನು ಒದಗಿಸಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಈಗಾಗಲೇ ಶಾಲೆಗೆ ದಾಖಲಾಗಿರುವ ಎಲ್ಲಾ ಮಕ್ಕಳಿಗೆ ವಿದ್ಯಾವಿಕಾಸ ಯೋಜನೆಯಡಿಯಲ್ಲಿ ವಿವಿಧ ಪ್ರೋತ್ಸಾಹದಾಯಕ ಯೋಜನೆಯಡಿಯಲ್ಲಿ ಪಠ್ಯಪುಸ್ತಕ ವಿತರಿಸಲಾಗಿರುತ್ತದೆ. ಪಠ್ಯ ಪುಸ್ತಕಗಳನ್ನು ವೆಬ್‌ಸೈಟ್ ನಲ್ಲಿಯೂ ಸಹ ಪ್ರಕಟಿಸಲಾಗಿರುತ್ತದೆ.

ಮಕ್ಕಳಿಗೆ ವಿದ್ಯಾವಿಕಾಸ ಯೋಜನೆಯಡಿಯಲ್ಲಿ ವಿವಿಧ ಪ್ರೋತ್ಸಾಹದಾಯಕ ಯೋಜನೆಯಡಿಯಲ್ಲಿ ಸಮವಸ್ತ್ರ ವಿತರಿಸಲಾಗಿರುತ್ತದೆ. ಮದ್ಯಾಹ್ನದ ಬಿಸಿಯೂಟದ ಬದಲಿಗೆ ಆಹಾರ ಧಾನ್ಯಗಳನ್ನು ಮನೆಗೆ ಒಯ್ಯಲು ವಿತರಿಸಲಾಗುತ್ತಿದೆ.

ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ದಿನಾಂಕ 19-02-2021ರಂತೆ ರಾಜ್ಯದಲ್ಲಿನ ಸರ್ಕಾರಿ, ಅನುದಾನ ಮತ್ತು ಅನುದಾನ ರಹಿತ ಶಾಲೆಗಳಲ್ಲಿನ 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗಳನ್ನು ಪೂರ್ಣ ಪ್ರಮಾಣದಲ್ಲಿ

ಪುನರಾರಂಭ ಮಾಡುವ ಕುರಿತು ಬೆಂಗಳೂರು ನಗರದ ಬಿ.ಬಿ.ಎಂ.ಪಿ ವ್ಯಾಪ್ತಿ ಮತ್ತು ಕೇರಳ ರಾಜ್ಯದ ಗಡಿಭಾಗಕ್ಕೆ ಹೊಂದಿಕೊಂಡ ಪ್ರದೇಶಗಳನ್ನು ಹೊರತುಪಡಿಸಿ ಉಳಿದೆಲ್ಲಾ ಕಡೆ 6ನೇ ತರಗತಿಯಿಂದ 8ನೇ ತರಗತಿಯವರೆಗೆ ಪ್ರತಿ ದಿನ ಪೂರ್ಣಾವಧಿ ಶಾಲೆಯನ್ನು ನಡೆಸಲು ಹಾಗೂ ಬೆಂಗಳೂರು ನಗರದ ಬಿ.ಬಿ.ಎಂ.ಪಿ ವ್ಯಾಪ್ತಿ ಮತ್ತು ಕೇರಳ ರಾಜ್ಯದ ಗಡಿಭಾಗಕ್ಕೆ ಹೊಂದಿಕೊಂಡ ಪ್ರದೇಶಗಳಲ್ಲಿ 8ನೇ ತರಗತಿ ಪೂರ್ಣಾವಧಿ ಶಾಲೆ ಪ್ರಾರಂಭಿಸಲು ಹಾಗೂ 6 ಮತ್ತು 7ನೇ ತರಗತಿಗಳು ವಿದ್ಯಾಗಮ ಕಾರ್ಯಕ್ರಮಗಳನ್ನು ಮುಂದುವರಿಸಲು ತಿಳಿಸಲಾಗಿದೆ.

ವಿದ್ಯಾರ್ಥಿಗಳಿಗೆ ಕಲಿಕೆಯಲ್ಲಿ ತೊಂದರೆಯಾಗದಂತೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-

- ಗ್ರಾಮೀಣ ಪ್ರದೇಶಗಳ ಶಾಲೆಗಳಲ್ಲಿ ಪರ್ಯಾಯ ಮಾರ್ಗಗಳ ಮೂಲಕ ಮಕ್ಕಳನ್ನು ನಿರಂತರವಾಗಿ ಕಲಿಕಾ ಪ್ರಕ್ರಿಯೆಯಲ್ಲಿ ತೊಡಗಿಸಲು ವಿದ್ಯಾಗಮ, ಬಾನುಲಿ ಹಾಗೂ ಸಂವೇದನಾ ಎಂಬ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.
- ಮೇಲಿನ ಅಂಶಗಳ ಹೊರತಾಗಿಯೂ ಕೋವಿಡ್-19ರ ತುರ್ತು ಸಮಯದಲ್ಲಿ ಶೈಕ್ಷಣಿಕ ವರ್ಷ ಜೂನ್-2020 ರಲ್ಲಿ ಪ್ರಾರಂಭವಾಗಬೇಕಿದ್ದು, ಸದರಿ ಸಮಯದಲ್ಲಿ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದೆಂದು ಗ್ರಾಮ ಮತ್ತು ವಾರ್ಡ್ ಮಟ್ಟದಲ್ಲಿ ಶಿಕ್ಷಕರು ತೆರಳಿ 20-25 ವಿದ್ಯಾರ್ಥಿಗಳಿಗೆ ಪಾಠಬೋಧನೆ ಮಾಡಿ ಶೈಕ್ಷಣಿಕ ಚಟುವಟಿಕೆಗಳನ್ನು ನೀಡಿರುತ್ತಾರೆ.
- 6-10ನೇ ತರಗತಿಯ ವಿದ್ಯಾರ್ಥಿಗಳಿಗೆ ಪೂರ್ಣಪ್ರಮಾಣದ ತರಗತಿಗಳನ್ನು ಪ್ರಾರಂಭಿಸಲಾಗಿರುತ್ತದೆ.
- 5ನೇ ತರಗತಿಗೆ ದೂರದರ್ಶನ ಮೂಲಕ ಇ-ಸಂವೇದ ಕಾರ್ಯಕ್ರಮವ ಮೂಲಕ ಶೈಕ್ಷಣಿಕ ಮಾರ್ಗದರ್ಶನ ನೀಡಲಾಗುತ್ತಿದೆ.
- 1-4ನೇ ತರಗತಿಯವರೆಗೆ ಬಾನುಲಿ ಮುಖಾಂತರ ತರಗತಿಗಳನ್ನು ಹಮ್ಮಿಕೊಂಡು ಮಕ್ಕಳನ್ನು ನಿರಂತರ ಕಲಿಕೆಯಲ್ಲಿ ತೊಡಗಿಸಿಕೊಳ್ಳಲಾಗಿರುತ್ತದೆ.
- ನಗರ ಪ್ರದೇಶಗಳಲ್ಲಿ ಆನ್ ಲೈನ್ ತರಗತಿ ಮತ್ತು ವಾಟ್ಸಪ್ ಮುಖಾಂತರ ವಿದ್ಯಾರ್ಥಿಗಳನ್ನು ಕಲಿಕೆಯಲ್ಲಿ ತೊಡಗಿಸಿಕೊಳ್ಳಲಾಗಿರುತ್ತದೆ.
- ಯು-ಟ್ಯೂಬ್ ಮುಖಾಂತರ ಮಕ್ಕಳ ಕಲಿಕೆಗೆ ಅನುವು ಮಾಡಿಕೊಳ್ಳಲಾಗಿರುತ್ತದೆ.
- ಉಳಿದಂತೆ ಅಂತರ್ಜಾಲ ಸಂಪರ್ಕ ಲಭ್ಯವಿರುವ ಪ್ರದೇಶಗಳಲ್ಲಿ ಆನ್‌ಲೈನ್ & ಯು-ಟ್ಯೂಬ್ ಮುಖಾಂತರ ಮುಖಾಂತರ ಬೋಧಿಸಲಾಗುತ್ತಿದೆ.
- ಒಟ್ಟಾರೆಯಾಗಿ ಮಕ್ಕಳನ್ನು ಪ್ರಮಾಣಿತ ಕಾರ್ಯಾಚರಣಾ ವಿಧಾನ (SOP) ಪಾಲಿಸಿ ನಿರಂತರವಾಗಿ ಕಲಿಕಾ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳಲಾಗಿರುತ್ತದೆ.

- ಒಟ್ಟಾರೆ ಮಕ್ಕಳು ಶೈಕ್ಷಣಿಕ ಚಟುವಟಿಕೆಗೊಳಲ್ಲಿ ತೊಡಗಿಸಿಕೊಳ್ಳಲು ಅನುವಾಗುವಂತೆ ನೇರ ಶಿಕ್ಷಣ, ವಿದ್ಯಾಗಮ, ಬಾನುಲಿ, ಚಂದನ ದೂರದರ್ಶನ ಆನ್‌ಲೈನ್, ಯು-ಟ್ಯೂಬ್, ಮುಖಾಂತರ ಬೋಧಿಸಲಾಗುತ್ತಿದೆ
- ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ನೋಂದಾಯಿಸಲು ದಿನಾಂಕವನ್ನು ವಿಸ್ತರಿಸಲಾಗಿರುತ್ತದೆ. ಎಸ್.ಎಸ್.ಎಲ್.ಸಿ ಪರಿಕ್ಷೆಯನ್ನು ಜೂನ್-2021ನೇ ತಿಂಗಳಲ್ಲಿ ಹಮ್ಮಿಕೊಳ್ಳಲಾಗಿರುತ್ತದೆ.
- ಆರ್.ಟಿ.ಇ ಅಡಿ ದಾಖಲಾಗಿರುವ ಮಕ್ಕಳ ಶುಲ್ಕವನ್ನು ಮರುಪಾವತಿಸಲು ಕ್ರಮ ವಹಿಸಲಾಗುತ್ತಿದೆ.

ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ದಿನಾಂಕ 19-02-2021ರಂತೆ ರಾಜ್ಯದ ಶಾಲೆಗಳಲ್ಲಿ ಕೋವಿಡ್-19 ಹಿನ್ನಲೆಯಲ್ಲಿ ಪ್ರಸ್ತುತ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಇದುವರೆವಿಗೂ ಶಾಲೆಗಳಿಗೆ ಪೂರ್ಣ ಪ್ರಮಾಣದಲ್ಲಿ ವಿದ್ಯಾರ್ಥಿಗಳು ದಾಖಲಾತಿಯಾಗಿಲ್ಲದ ಕಾರಣ 30ನೇ ಮಾರ್ಚ್ 2021ರವರೆಗೆ ಶಾಲಾ ಪ್ರವೇಶ ದಾಖಲಾತಿ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ.

2019-20ನೇ ಸಾಲಿನಲ್ಲಿ ಸುಮಾರು 6,53,224 ವಿದ್ಯಾರ್ಥಿಗಳು ರಾಜ್ಯದಲ್ಲಿ ಪ್ರಥಮ ಪಿಯುಸಿಗೆ ದಾಖಲಾಗಿದ್ದರು, ಕೋವಿಡ್ 19ರ ಹಿನ್ನೆಲೆಯಲ್ಲಿ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳನ್ನು ಉತ್ತೀರ್ಣಗೊಳಿಸಿದ್ದು, ದ್ವಿತೀಯ ಪಿ.ಯು.ಸಿ ಗೆ ದಾಖಲಾಗಲು ಸೂಚಿಸಲಾಗಿತ್ತು. ಮುಂದುವರೆದು, 2020-21ನೇ ಸಾಲಿಗೆ ಇಲಾಖೆಯ ಪೋರ್ಟಲ್‌ನಲ್ಲಿ ಲಭ್ಯವಿರುವ ಮಾಹಿತಿಯಂತೆ 5,82,330 ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ. ದ್ವಿತೀಯ ಪಿ.ಯು.ಸಿ ತರಗತಿಗಳು ದಿನಾಂಕ:01-01-2021ರಿಂದ ಆರಂಭವಾಗಿದ್ದರೂ ಸಹ ಯಾವುದೇ ವಿದ್ಯಾರ್ಥಿಗಳು ದಾಖಲಾತಿಗಳಿಂದ ವಂಚಿತರಾಗಬಾರದೆಂದು ದಿನಾಂಕ:20-02-2021ರ ವರೆಗೆ ದಾಖಲಾತಿಗೆ ಅವಕಾಶ ನೀಡಲಾಗಿತ್ತು. ಅದಾಗ್ಯೂ ಸುಮಾರು 70,894 ವಿದ್ಯಾರ್ಥಿಗಳು ದಾಖಲಾತಿ ಪಡೆದಿರುವುದಿಲ್ಲ. ಉಳಿಕೆಯಾಗಿರುವ ವಿದ್ಯಾರ್ಥಿಗಳಲ್ಲಿ ಕೆಲವರು ವಿದ್ಯಾಭ್ಯಾಸವನ್ನು ಮುಂದುವರೆಸಿರುವುದಿಲ್ಲ. ಇನ್ನೂ ಕೆಲವರು ವಲಸೆ ಹೋಗಿರಬಹುದಾಗಿದ್ದು, ಕಾಲೇಜುಗಳಿಗೆ ದಾಖಲಾಗಿರುವುದಿಲ್ಲ. ಇದರೊಂದಿಗೆ ಕೋವಿಡ್-19 ಹರಡುವಿಕೆಯಿಂದ ಲಕ್ಷಾಂತರ ವಿದ್ಯಾರ್ಥಿಗಳ ವಿದ್ಯಾಭ್ಯಾಸದಲ್ಲಿ ಕೊರತೆ ಉಂಟಾಗಬಹುದು ಎಂಬ ಕಾರಣದಿಂದ ಕಲಿಕಾ ಪ್ರಕ್ರಿಯೆಯಲ್ಲಿ ನಿರಂತರತೆ ಕಾಪಾಡುವ ದೃಷ್ಟಿಯಿಂದ ಪ್ರೀ-ರೆಕಾರ್ಡೆಡ್ ತರಗತಿಗಳನ್ನು ಯೂ-ಟ್ಯೂಬ್ ಮತ್ತು ಜಾಲತಾಣಗಳಲ್ಲಿ ಎಲ್ಲಾ ಸಮಯದಲ್ಲಿ ಲಭ್ಯವಾಗುವಂತೆ ಅಳವಡಿಸಿದೆ.

ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ದಿನಾಂಕ-26-02-2021ರಂತೆ 2019-20ನೇ ಸಾಲಿನ ಅಂಗನವಾಡಿ ಮಕ್ಕಳ ದಾಖಲಾತಿ ವಿವರಗಳನ್ನು ಪಡೆದು 2020-21ನೇ ಸಾಲಿನಲ್ಲಿ ಈ ಎಲ್ಲಾ ಮಕ್ಕಳನ್ನು ಹಾಗೂ ಪ್ರತ್ಯೇಕವಾಗಿ ಅಂಗನವಾಡಿಗಳಿಂದ ಹೊರಗುಳಿದ ಮಕ್ಕಳು, ಮನೆ ಮನೆ ಸಮೀಕ್ಷೆಯಲ್ಲಿ ಗುರುತಿಸಿದ ಶಾಲಾ ದಾಖಲಾತಿ ಅರ್ಹ ವಯೋಮಾನದ ಮಕ್ಕಳನ್ನು ಶಾಲಾ ಮುಖ್ಯವಾಹಿನಿಗೆ ತರಲು ಎಲ್ಲಾ ಅಗತ್ಯ ಕ್ರಮ ವಹಿಸಲು ಸೂಚಿಸಲಾಗಿದೆ.

ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಯೋಗದಿಂದ ಮನೆ ಮನೆ ಸಮೀಕ್ಷೆ ನಡೆಸಿ ಶಾಲೆಯಿಂದ ಹೊರಗೊಳಿದ ಮಕ್ಕಳನ್ನು ಶಾಲಾ ಮಖ್ಯವಾಹಿನಿಗೆ ತರಲು ಅಧ್ಯತೆ ಮೇರೆಗೆ ಕ್ರಮ ವಹಿಸಲಾಗಿದೆ.

ಮಾನ್ಯ ಉಚ್ಚನ್ಯಾಯಾಲಯದ ನಿರ್ದೇಶನದಂತೆ, ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಸಾರ್ವಜನಿಕ ಶಿಕ್ಷಣ ಇಲಾಖೆ, ಮಕ್ಕಳ ರಕ್ಷಣೆ ಆಯೋಗ, ಮಹಿಳ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪೋಲೀಸ್ ಇಲಾಖೆ, ಆರೋಗ್ಯ ಇಲಾಖೆ, ಬಿ.ಬಿ.ಎಂ.ಪಿ ಈ ಎಲ್ಲಾ ಇಲಾಖೆಗಳ ಸಹಯೋಗ ಹಾಗೂ ಸಹಕಾರದೊಂದಿಗೆ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಗೊಂಬೆ ಮತ್ತು ಹೂವುಗಳನ್ನು ಮಾರುವ ಮಕ್ಕಳು, ಪರಿತ್ಯಕ್ತ ಮಕ್ಕಳು, ಬೀದಿ ಮಕ್ಕಳು, ಅನಾಥ ಮಕ್ಕಳು ಇತ್ಯಾದಿ ಶಾಲೆಯಿಂದ ಹೊರಗೊಳಿದ ಎಲ್ಲಾ ಮಕ್ಕಳ ಸಮೀಕ್ಷೆ ನಡೆಸಿ, ಗುರುತಿಸಿದ ಮಕ್ಕಳನ್ನು ಶಾಲಾಮುಖ್ಯವಾಹಿನಿಗೆ ತರಲು ಕ್ರಮ ವಹಿಸಲಾಗುತ್ತಿದೆ.

ಕೋವಿಡ್-19ರ ಲಾಕ್‌ಡೌನ್ ನಿಂದ ಉಂಟಾದ ಆರ್ಥಿಕ ಸಂಕಷ್ಟ ಹಾಗೂ ವಿದ್ಯಾರ್ಥಿಗಳಲ್ಲಿ ಕಲಿಕಾ ಸಾಮರ್ಥ್ಯದ ಮೇಲೆ ಉಂಟಾಗಿರುವ ಪ್ರಭಾವದ ಕುರಿತ ಸಮೀಕ್ಷೆ ಬಗ್ಗೆ ಯಾವುದೇ ಸರ್ವೆ ಕಾರ್ಯಕ್ರಮವನ್ನು ಸರ್ಕಾರದ ಮಟ್ಟದಲ್ಲಿ ಹಮ್ಮಿಕೊಂಡಿರುವುದಿಲ್ಲ.

**ಇಪಿ 106 ಪಿಜಿಸಿ 2021**

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.